ಮೂಲ ದಾವಾ ಸಂಖ್ಯೆ.75/2025 ಪಿ ಡಬ್ಲ್ಯೂ 1

(ದಿನಾಂಕ 07-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.)

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಇ ಎ ಕೆ ವಕೀಲರ ಪರವಾಗಿ ಜಿ ಜೆ ಪಿ ವಕೀಲರಿಂದಃ-

ನಾನು ನನ್ನ ಮುಖ್ಯ ವಿಚಾರಣಾ ಸಾಕ್ಷ್ಯದ ಕುರಿತು ನ್ಯಾಯಾಲಯದ ಮುಂದೆ ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಇರುತ್ತದೆ. ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು ಅದಕ್ಕೆ ನಾನೇ ಸಹಿ ಮಾಡಿದ್ದೇನೆ.

ದಿಃ28-01-1991 ರ ಕ್ರಯ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದಿಃ26-07-2021 ರ ಕ್ರಯಪತ್ರದ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದಿಃ27-07-2021 ರ ಕ್ರಯಪತ್ರದ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ವಂಶವೃಕ್ಷದ ದೃಢೀಕರಣ ಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಸರ್ವೆ ನಂ.12/7 ಮತ್ತು ಸರ್ವೆ ನಂ.12/ಸಿ1 ಸಿ1 ರ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-5 ಮತ್ತು 6 ಎಂದು, ಮ್ಯುಟೇಶನ್ ನಂ.ಟಿ-32 ರ 2 ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-7 ಮತ್ತು 8 ಎಂದು, ಎಂ ಆರ್ ನಂ.ಟಿ-191 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು, ಸರ್ವೆ ನಂ.12/ಸಿ1 ಸಿ1 ರ ಪಹಣಿ ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು, ಎಂ ಆರ್ ನಂ.ಟಿ-91 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು, 3 ಇಸಿ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-12 ರಿಂದ 14 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಸಮಯಾವಕಾಶ ಕೋರಿದ್ದು ನೀಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ,

ಸಿವಿಲ್ ಜಡ್ಜ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ